**Akashvani : Bangalore**
**Regional Bulletin In Kannada**
**31.10.2025 / 6.40 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಅಲೆಮಾರಿ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಕಲ್ಪಿಸಲು ಸರ್ಕಾರ ಬದ್ಧ - ಮುಖ್ಯಮಂತ್ರಿ

೨. ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಮೂರು ದಿನಗಳೊಳಗೆ ರಸ್ತೆ ಗುಂಡಿಗಳನ್ನು ಮುಚ್ಚಲು ಆದ್ಯತೆಯ ಮೇಲೆ ಕ್ರಮ - ಮುಖ್ಯ ಆಯುಕ್ತ

೩. ರಾಜ್ಯಾದ್ಯಂತ ಸರ್ದಾರ್ ವಲ್ಲಭ ಭಾಯ್ ಪಟೇಲ್ ೧೫೦ನೇ ಜನ್ಮದಿನ; ಹಲವೆಡೆ ಏಕತಾ ಪ್ರತಿಜ್ಞೆ ಸ್ವೀಕಾರ

೪. ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ರಾಜ್ಯಮಟ್ಟದ ೭೦ನೇ ಕರ್ನಾಟಕ ರಾಜ್ಯೋತ್ಸವಕ್ಕೆ ಸಕಲ ಸಿದ್ಧತೆ

***************

ಅಲೆಮಾರಿ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಕಲ್ಪಿಸಲು ಸರ್ಕಾರ ಬದ್ಧವಾಗಿದ್ದು ಶೇಕಡ ೧ರಷ್ಟು ಮೀಸಲಾತಿಯನ್ನು ಯಾವ ರೀತಿಯಲ್ಲಿ ಕಲ್ಪಿಸಬಹುದು ಎಂಬ ಬಗ್ಗೆ ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಒಳ ಮೀಸಲಾತಿ ಕುರಿತು ಅಲೆಮಾರಿ ಒಕ್ಕೂಟದ ಪದಾಧಿಕಾರಿಗಳ ನಿಯೋಗ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನಸೌಧದಲ್ಲಿ ಭೇಟಿ ಮಾಡಿ ಮನವಿ ಸಲ್ಲಿಸಿತು. ಒಳಮೀಸಲಾತಿ ಕಲ್ಪಿಸಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡಿದೆ. ಈಗ ಉಂಟಾಗಿರುವ ಗೊಂದಲಗಳಿಗೂ ಆದ್ಯತೆ ಮೇರೆಗೆ ಪರಿಹಾರ ಕಂಡುಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ಶಿಫಾರಸಿನಂತೆ ಒಳಮೀಸಲಾತಿಯಲ್ಲಿ ಅಲೆಮಾರಿ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಕಲ್ಪಿಸುವ ನಿಟ್ಟಿನಲ್ಲಿ ಅಲೆಮಾರಿ ಸಮುದಾಯಕ್ಕೆ ಪ್ರತ್ಯೇಕ ಶೇಕಡ ೧ರಷ್ಟು ಮೀಸಲಾತಿ ಕಲ್ಪಿಸಲು ಆದ್ಯತೆ ನೀಡುವಂತೆ ಅಲೆಮಾರಿ ಸಮುದಾಯಗಳ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ರಚನೆ ಹಾಗೂ ಅಲೆಮಾರಿ ಸಮುದಾಯಗಳಿಗೆ

ವಿಶೇಷ ಆರ್ಥಿಕ ಪ್ಯಾಕೇಜ್ ನೀಡುವ ಕುರಿತಂತೆ ಮುಖ್ಯಮಂತ್ರಿ ಅವರಲ್ಲಿ ನಿಯೋಗ ಮನವಿ ಮಾಡಿತು.

***************

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಈಗಾಗಲೇ ೧೫ ಸಾವಿರಕ್ಕೂ ಹೆಚ್ಚು ರಸ್ತೆ, ಗುಂಡಿಗಳನ್ನು ಮುಚ್ಚಲಾಗಿದ್ದು, ಇನ್ನು ಮೂರು ದಿನಗಳ ಒಳಗೆ ಸಂಚಾರ ದಟ್ಟಣೆಗೆ ಕಾರಣವಾಗುವ ಸ್ಥಳಗಳ ಗುಂಡಿಗಳನ್ನು ಆದ್ಯತೆಯ ಮೇಲೆ ಮುಚ್ಚಲಾಗುವುದು ಎಂದು ಮುಖ್ಯ ಆಯುಕ್ತ ಮಹೇಶ್ವರ ರಾವ್ ತಿಳಿಸಿದ್ದಾರೆ. ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ದಿನ ಕಸ ವಿಲೇವಾರಿ ವಾಹನ ಮನೆಯ ಹತ್ತಿರ ಬಂದರೂ, ರಸ್ತೆ ಬದಿಯಲ್ಲಿ ಕಸ ಬಿಸಾಡುವವರ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. ಬೆಂಗಳೂರು ನಗರವನ್ನು ಸುಂದರವಾಗಿಸಲು ಎಲ್ಲರೂ ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

*****ಧ್ವನಿ**** ಮಹೇಶ್ವರ ರಾವ್

***************

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯಾದ ಇಂದು ದೇಶವು ಅವರಿಗೆ ಗೌರವ ಸಲ್ಲಿಸುತ್ತಿದೆ. ಈ ದಿನವನ್ನು ರಾಷ್ಟ್ರೀಯ ಏಕತಾ ದಿನ ಎಂದೂ ಆಚರಿಸಲಾಗುತ್ತದೆ, ಇದು ಸ್ವಾತಂತ್ರ್ಯದ ನಂತರ ಭಾರತವನ್ನು ಒಗ್ಗೂಡಿಸುವಲ್ಲಿ ಸರ್ದಾರ್ ಪಟೇಲ್ ವಹಿಸಿದ ಪಾತ್ರವನ್ನು ಸ್ಮರಿಸಲು ಅವಕಾಶ ಒದಗಿಸುತ್ತದೆ. ರಾಜ್ಯದ ವಿವಿಧೆಡೆ ಇಂದು ರಾಷ್ಟ್ರೀಯ ಐಕ್ಯತಾ ದಿನಾಚರಣೆ, ಏಕತಾ ಓಟ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ವಾರ್ಷಿಕೋತ್ಸವದ ಸ್ಮರಣಾರ್ಥ ತುಮಕೂರು ವಿಶ್ವವಿದ್ಯಾಲಯದ ಬಳಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಏಕತಾ ದಿವಸ್ ಆಚರಣೆ ಕಾರ್ಯಕ್ರಮದಲ್ಲಿ ವಲ್ಲಭಭಾಯಿ ಪಟೇಲರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಏಕತಾ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಕೇಂದ್ರ ಸಚಿವ ವಿ.ಸೋಮಣ್ಣ, ಭಾರತದ ಒಕ್ಕೂಟ ವ್ಯವಸ್ಥೆಗೆ ಮೂಲ ಕಾರಣರಾಗಿರುವ ಸರ್ದಾರ್ ವಲ್ಲಭಾಭಾಯಿ ಪಟೇಲ್ ಅವರ ಕನಸಾದ ಐಕ್ಯ, ಬಲಿಷ್ಠ ಮತ್ತು ಸ್ವಾವಲಂಬಿ ಭಾರತವನ್ನು ನಿರ್ಮಾಣದ ಅವರ ಸಂಕಲ್ಪ ಯುವಜನರಿಗೆ ಸ್ಫೂರ್ತಿದಾಯಕವಾಗಲಿ. ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಲಿ ಎಂದು ಹೇಳಿದರು. ಮೈಸೂರಿನಲ್ಲಿ ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ಕೇಂದ್ರ ಸಂವಹನ ಇಲಾಖೆ, ವಾರ್ತಾ ಮತ್ತು ಪ್ರಚಾರ ಸಚಿವಾಲಯ, ಸಂತ ಫಿಲೋಮಿನಾ ಕಾಲೇಜು, ಎನ್‌ಎಸ್‌ಎಸ್ ಘಟಕ, ರೇಂಜರ್ಸ್ ಅಂಡ್ ರೋವರ್ ಸ್ಪೋರ್ಟ್ಸ್ ಸಂಯುಕ್ತಾಶ್ರಯದಲ್ಲಿ ಸರ್ದಾರ್ ವಲ್ಲಭಭಾಯ್

ಪಟೇಲ್ ಜನ್ಮದಿನದ ಅಂಗವಾಗಿ "ಏಕತೆಗೆ ಓಟ" ಕಾರ್ಯಕ್ರಮವನ್ನು ಮೈಸೂರಿನ ಸಂತ ಫಿಲೋಮಿನಾ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು. ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮದಿನೋತ್ಸವದ ಸಂದರ್ಭದಲ್ಲಿ ವಿಜಯನಗರ ಬಿಜೆಪಿ ಜಿಲ್ಲಾ ಘಟಕದಿಂದ ಏಕತಾ ನಡಿಗೆ ಆಯೋಜಿಸಲಾಗಿತ್ತು. ಕೊಪ್ಪಳ ಜಿಲ್ಲಾ ಪೊಲೀಸ್ ವತಿಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಏಕತಾ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ಐಕ್ಯತೆಗಾಗಿ ಓಟ ಕಾರ್ಯಕ್ರಮಕ್ಕೆ ಜಿಲ್ಲಾ ಪ್ರವಾಸದಲ್ಲಿರುವ ಉಪಲೋಕಾಯುಕ್ತ ಬಿ.ವೀರಪ್ಪ ಏಕತಾ ಓಟಕ್ಕೆ ಚಾಲನೆ ನೀಡಿದರು. ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಏಕತಾ ಓಟವನ್ನು ಹಮ್ಮಿಕೊಳ್ಳಲಾಗಿತ್ತು. ನಗರದ ಕನ್ನೆ ಭವನದಿಂದ ಆರಂಭವಾದ ಏಕತಾ ಓಟ ಬಿ.ಬಿ ರಸ್ತೆ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿತು. ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ. ನವೀನ್ ಭಟ್ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ಹಾಗೂ ವಿವಿಧ ಹಂತದ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ, ಶಾಲಾಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ನೈರುತ್ಯ ರೈಲ್ವೆ ಬೆಂಗಳೂರು ವಿಭಾಗವು ಸರ್ದಾರ್ ವಲ್ಲಭಭಾಯ್ ಪಟೇಲ್ ಜನ್ಮದಿನದ ಅಂಗವಾಗಿ ಇಂದು ರಾಷ್ಟ್ರೀಯ ಏಕತಾ ದಿನವನ್ನು ಆಚರಿಸಿತು. ಈ ಸಂದರ್ಭದಲ್ಲಿ ಬೆಂಗಳೂರಿನ ಎಂ.ಜಿ. ರೈಲ್ವೆ ಕಾಲೋನಿಯಲ್ಲಿ ಏಕತೆಗಾಗಿ ಓಟ ಆಯೋಜಿಸಲಾಗಿತ್ತು. ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್, ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಏಕತಾ ದಿನದ ಪ್ರತಿಜ್ಞೆಯನ್ನು ಬೋಧಿಸಿದರು.

***************

೭೦ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ರಾಜ್ಯ ಮಟ್ಟದ ಕಾರ್ಯಕ್ರಮ ನಾಳೆ ಬೆಂಗಳೂರಿನ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ರಾಜ್ಯಮಟ್ಟದ ಕಾರ್ಯಕ್ರಮ ನಡೆಯಲಿದೆ. ಬೆಳಗ್ಗೆ ೯ ರಿಂದ ೧೧.೩೦ರ ವರೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರೂ ಸೇರಿದಂತೆ ಹಲವು ಗಣ್ಯರು, ಅಧಿಕಾರಿಗಳು ಭಾಗವಹಿಸಲಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಅವರ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಇಂದಿರಾಗಾಂಧಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

***************

ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರಕ್ಕೆ ಹಿರಿಯ ಸಾಹಿತಿಗಳು ಸಾಹಿತ್ಯ ಹಾಗೂ ಗ್ರಂಥಗಳನ್ನು ಕೊಡುಗೆಯಾಗಿ ನೀಡುತ್ತಿರುವುದು ಶಿಖರಪ್ರಾಯವಾಗಿದೆ, ಇಲ್ಲಿನ ಸಾಹಿತ್ಯದ ರತ್ನಪ್ರಪಂಚ ಕನ್ನಡ ಸಾಹಿತ್ಯಕ್ಕೆ ಮೆರಗು ತಂದಿದೆ, ಶರಣಕಾರರು, ವಚಣಕಾರರು ಜ್ಞಾನಕ್ಕೆ ಹೆಚ್ಚು ಪ್ರೋತ್ಸಾಹ ನೀಡಿದ್ದಾರೆ, ಜ್ಞಾನ ನಿಂತ ನೀರಲ್ಲ ಇದು ಹರಿಯುವ ಶುದ್ಧ ನೀರಾಗಿದೆ ಎಂದು ಸಂಸ್ಕೃತ ವಿಶ್ವ ವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ ಮಲ್ಲೇಪುರಂ ಜಿ. ವೆಂಕಟೇಶ್ ಹೇಳಿದ್ದಾರೆ. ಅವರು ಮೈಸೂರಿನ ಭಾರತೀಯ ಭಾಷಾ ಸಂಸ್ಥೆಯ ಸಭಾಂಗಣದಲ್ಲಿಂದು ಶಾಸ್ತ್ರೀಯ ಕನ್ನಡ ಭಾಷಾ ಮಾನ್ಯತಾ ದಿನಾಚರಣೆ ಉದ್ಘಾಟಿಸಿ ಮಾತನಾಡುತ್ತಿದ್ದರು.

***************

ಕೃತಕ ಬುದ್ದಿಮತ್ತೆ, ಹೊಸ ತಂತ್ರಜ್ಞಾನಕ್ಕೆ ನಾವು ಹೆಚ್ಚು ಉತ್ತೇಜನ ನೀಡಿದರೆ ಮುಂದೊಂದು ದಿನ ಮನುಷ್ಯ ಸಂಬಂಧಗಳು ನಾಶವಾಗುವುದರಲ್ಲಿ ಸಂಶಯವಿಲ್ಲ. ಮಾನವಿಕ ವಿಷಯಗಳ ಅಧ್ಯಯನದಿಂದ ಸಮಾಜದ ಬಹುತ್ವ ಅರಿವು ಸಾಧ್ಯ ಎಂದು ಖ್ಯಾತ ಸಾಹಿತಿ ಡಾ.ಬರಗೂರು ರಾಮಚಂದ್ರಪ್ಪ ತಿಳಿಸಿದ್ದಾರೆ. ಕೋಲಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಮಾಸ್ತಿ ವೆಂಕಟೇಶ ಅಯ್ಯಂಗಾರ್ ವೇದಿಕೆಯಲ್ಲಿ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ ಹಾಗೂ ತೋಟಗಾರಿಕಾ ಮಹಾವಿಶ್ವವಿದ್ಯಾಲಯದ ೧೬ನೇ ಅಂತರ ವಿಶ್ವವಿದ್ಯಾಲಯ ಯುವಜನೋತ್ಸವ-೨೦೨೫ರ ಕಾರ್ಯಕ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವಜನರು ಒಳಿತು ಕೆಡಕುಗಳ ನಡುವಿನ ಸಂಘರ್ಷದಲ್ಲಿ ಧೃತಿಗೆಡದೆ ಜೀವನದಲ್ಲಿ ಒಳ್ಳೆಯ ಸಾಧನೆಯನ್ನು ಮಾಡಬೇಕು. ಶಿಕ್ಷಣ ಇಂದು ಹಳ್ಳಿ ಹಳ್ಳಿಗೂ ಬಂದು ಜನರು ಅಕ್ಷರಸ್ಥರಾಗುತ್ತಿದ್ದಾರೆ. ವಿದ್ಯಾವಂತರ ಬಾಯಲ್ಲಿ ಮಾತ್ರ ಸಾಹಿತ್ಯ ಹೊರಬರದೆ, ಇಂದು ಅನಕ್ಷರಸ್ಥರೂ ಸಾಹಿತ್ಯವನ್ನು ವಾಚಿಸಬಲ್ಲವನಾಗಿದ್ದಾನೆ ಎಂದರು.

***************

ಕನ್ನಡ ರಾಜ್ಯೋತ್ಸವದ ಅಂಗವಾಗಿ ೨೦೨೫ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇಕಡ ೫೦ರಷ್ಟು ರಿಯಾಯಿತಿ ಘೋಷಿಸಿದೆ. ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಅಲ್ಲದೆ ಕನ್ನಡ ಪುಸ್ತಕ ಪ್ರಾಧಿಕಾರದ ಜಾಲತಾಣ

https://kpp.karnataka.gov.in ಮೂಲಕ ಖರೀದಿಸಿದಾಗ ಕೂಡ ಶೇಕಡ ೫೦ರಷ್ಟು ರಿಯಾಯಿತಿ ಲಭ್ಯವಿದೆ ಎಂದು ಪ್ರಕಟಣೆ ತಿಳಿಸಿದೆ.

***************

ಉತ್ತರ ಕನ್ನಡ ಜಿಲ್ಲಾ ಲೋಕಸಭಾ ಸದಸ್ಯ ಹಾಗೂ ವಿಧಾನಸಭೆಯ ಮಾಜಿ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ನೇತೃತ್ವದ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚಿಸಿತು. ಬಳಿಕ ಮಾತನಾಡಿದ ಕಾಗೇರಿ, ಯು.ಟಿ ಖಾದರ್ ವಿರುದ್ಧ ಭ್ರಷ್ಟಾಚಾರದ ಗಂಭೀರ ಆರೋಪಗಳು ಕೇಳಿಬಂದಿವೆ. ಸ್ಪೀಕರ್ ವಿರುದ್ಧದ ಭ್ರಷ್ಟಾಚಾರ ಆರೋಪಗಳ ನ್ಯಾಯಾಂಗ ತನಿಖೆ ನಡೆಸುವುದು ಸೂಕ್ತ. ಹಾಲಿ ನ್ಯಾಯಾಧೀಶರಿಂದ ಪ್ರಕರಣದ ತನಿಖೆಯಾಗಬೇಕು ಎಂದು ಸ್ಪಷ್ಟಪಡಿಸಿದರು.

***************

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಯೋಜನೆಯಡಿ ಮತ್ಸ್ಯ ಸಂಜೀವಿನಿ, ಕುಕ್ಕುಟ ಸಂಜೀವಿನಿ, ಕ್ಷೀರ ಸಂಜೀವಿನಿಯಂತಹ ಕಾರ್ಯಕ್ರಮಗಳು ಲಭ್ಯವಿದ್ದು, ಸದರಿ ಚಟುವಟಿಕೆಗಳನ್ನು ಬಳಸಿಕೊಂಡು ಸ್ವ-ಸಹಾಯ ಸಂಘಗಳ ಮಹಿಳೆಯರು ಆರ್ಥಿಕ ಸ್ವಾವಲಂಬಿಗಳಾಗಬೇಕು ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ನಂದಿನಿ ಕರೆ ನೀಡಿದ್ದಾರೆ.

***************